ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–12

ಸಂಖ್ಯೆ: ಪಪೂಶಿಇ/ಶೈಸಾ–2/ಮಾ.ಪ್ರ.ಪ್ರ/2020–21 ದಿನಾಂಕ: 04.01.2021

## ಸುತ್ತೋಲೆ

ವಿಷಯ: ಕಡಿತಗೊಳಿಸಿದ ಪಠ್ಯಕ್ಕನುಗುಣವಾಗಿ ಸಿದ್ಧಪಡಿಸಿದ ಮಾದರಿ ಪ್ರಶ್ನೆಪತ್ರಿಕೆಗಳನ್ನು ಪ್ರಕಟಿಸುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್–19ರ ವಿಷಮ ಸ್ಥಿತಿಯ ಕಾರಣದಿಂದ 2020–21ನೇ ಶೈಕ್ಷಣಿಕ ಸಾಲಿನ ಅವಧಿಯು ತಡವಾಗಿ ಪ್ರಾರಂಭವಾಗಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮಾದರಿಯಲ್ಲಿ ಹಾಗೂ ಸರ್ಕಾರದ ಅನುಮತಿಯ ಮೇರೆಗೆ ಪ್ರಥಮ ಹಾಗೂ ದ್ವಿತೀಯ ಪಿಯುಸಿಯ ಪಠ್ಯದಲ್ಲಿ ಶೇಕಡಾ 30 ರಷ್ಟು ಪಠ್ಯವನ್ನು ಕಡಿತಗೊಳಿಸಿ ಈಗಾಗಲೇ ಪ್ರಕಟಿಸಲಾಗಿದೆ.

ಮುಂದುವರೆದು, ಕಡಿತಗೊಳಿಸಿದ ಪಠ್ಯಕ್ಕನುಗುಣವಾಗಿ ಪ್ರಸ್ತುತ ವರ್ಷಕ್ಕೆ ಮಾತ್ರ ಪ್ರಥಮ ಹಾಗೂ ದ್ವಿತೀಯ ಪಿಯುಸಿ ತರಗತಿಗಳ, ಎಲ್ಲಾ ವಿಷಯಗಳಿಗೆ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ವಿಷಯ ತಜ್ಞರಿಂದ ಸಿದ್ಧಪಡಿಸಲಾಗಿದೆ. ಸದರಿ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಉಪನ್ಯಾಸಕರು / ವಿದ್ಯಾರ್ಥಿಗಳಿಗೆ ತಲುಪಿಸಲು ಇಲಾಖೆಯ ಅಂತರ್ಜಾಲದಲ್ಲಿ (www.pue.kar.nic.in) ಅಳವಡಿಸಲಾಗಿದೆ. ಈ ಮಾಹಿತಿಯನ್ನು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ತಮಗೆ ಸಂಬಂಧಿಸಿದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳ ಮೂಲಕ ಉಪನ್ಯಾಸಕರು / ವಿದ್ಯಾರ್ಥಿಗಳಿಗೆ ತಲುಪಿಸುವಂತೆ ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಿದೆ.

*"ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ"*

R. Kusuma 04/01/2020

ಜಂಟಿ ನಿರ್ದೇಶಕರು (ಶೈಕ್ಷಣಿಕ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರ ಸೂಕ್ತ ಮಾಹಿತಿಗಾಗಿ.
2. ಇ–ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ ಅಂತರ್ಜಾಲದಲ್ಲಿ ಅಳವಡಿಸಲು.
3. ಹೆಚ್ಚುವರಿ / ಕಛೇರಿ ಪ್ರತಿ.

Scanned by CamScanner